<u>ಕರ್ನಾಟಕ ವಿಧಾನ ಪರಿಷತ್ತು</u>

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1597(1849) |
| ಸದಸ್ಯರ ಹೆಸರು | : | ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. |
| ಉತ್ತರಿಸಬೇಕಾದ ದಿನಾಂಕ | : | 23.03.2026 |
| ಉತ್ತರಿಸುವ ಸಚಿವರು | : | ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದಲ್ಲಿ ಅಂದಾಜು 6,500 ಕ್ಕೂ ಹೆಚ್ಚಿನ ಏಕಶಿಕ್ಷಕ ಶಾಲೆಗಳು ಮೂಲಸೌಕರ್ಯ ಕಲ್ಪಿಸದ ಕುಗ್ರಾಮಗಳಲ್ಲಿಯೇ ಕಾರ್ಯನಿರ್ವಹಿಸುತ್ತಿದ್ದು, ನಲಿ-ಕಲಿ ಯೋಜನೆಯನ್ನು ರದ್ದುಪಡಿಸುವುದರಿಂದ ಮಕ್ಕಳು ಶಿಕ್ಷಣದಿಂದ ಶಾಶ್ವತವಾಗಿ ವಂಚಿತರಾಗುವ ಸಂಭವವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಪ್ರಸ್ತುತ ರಾಜ್ಯದಲ್ಲಿ 46,675 ಸರ್ಕಾರಿ ಶಾಲೆಗಳಿದ್ದು ಇವುಗಳಲ್ಲಿ 41,776 ಶಾಲೆಗಳು ಸರ್ಕಾರಿ ಪ್ರಾಥಮಿಕ ಶಾಲೆಗಳಾಗಿರುತ್ತವೆ. ಈ ಪೈಕಿ 19,567 ಶಾಲೆಗಳು ಕಿರಿಯ ಪ್ರಾಥಮಿಕ, 21,430 ಹಿರಿಯ ಪ್ರಾಥಮಿಕ ಶಾಲೆಗಳಿರುತ್ತವೆ. ಈ ಶಾಲೆಗಳಲ್ಲಿ ಒಟ್ಟಾರೆಯಾಗಿ 28,96,827 ವಿದ್ಯಾರ್ಥಿಗಳು ದಾಖಲಾಗಿದ್ದು ಒಟ್ಟು 1,06,325 ಪ್ರಾಥಮಿಕ ಶಾಲಾ ಶಿಕ್ಷಕರು ಕಾರ್ಯ ನಿರ್ವಹಿಸುತ್ತಿದ್ದಾರೆ.<br><br>2009-10ನೇ ಸಾಲಿನಿಂದ ಶೈಕ್ಷಣಿಕ ಹಾಗೂ ಭೌತಿಕ ಸಂಪನ್ಮೂಲಗಳ ಕೊರತೆ, ವಲಸೆ ಹೋಗುವ ಕುಟುಂಬಗಳ ವಿದ್ಯಾರ್ಥಿಗಳು ಶೈಕ್ಷಣಿಕ ವರ್ಷದ ಮಧ್ಯಾಂತರದಲ್ಲಿ ತರಗತಿಗಳಿಗೆ ಪ್ರವೇಶ ಪಡೆಯುವ ಸಮಸ್ಯೆಯಿಂದ ಶೈಕ್ಷಣಿಕ ವ್ಯವಸ್ಥೆಯಲ್ಲಿ ಉಂಟಾಗಿದ್ದ ಒತ್ತಡವನ್ನು ಕಡಿಮೆ ಮಾಡಲು ಅನೇಕ ಪ್ರಯತ್ನಗಳನ್ನು ಮಾಡಲಾಗಿರುತ್ತದೆ. ಇವುಗಳಲ್ಲಿ ಬೋಧನೆಯ ಕಲಿಕಾ ವಿಧಾನವು ಒಂದಾಗಿರುತ್ತದೆ. ರಾಜ್ಯದ ಸರ್ಕಾರಿ ಶಾಲೆಗಳಲ್ಲಿ ಶೈಕ್ಷಣಿಕ ವ್ಯವಸ್ಥೆಯನ್ನು ಕ್ರಮೇಣವಾಗಿ ಬಲಪಡಿಸಲಾಗುತ್ತಿದ್ದು, ಶಿಕ್ಷಕರನ್ನು ಹಾಗೂ ಭೌತಿಕ ಸೌಲಭ್ಯಗಳನ್ನು ಒದಗಿಸಲಾಗಿರುವುದರಿಂದ ಇಂದಿನ ಸನ್ನಿವೇಶಕ್ಕೆ ಬಹುವರ್ಗ ಕಲಿಕಾ ವಿಧಾನವು ತನ್ನ ಪ್ರಸ್ತುತತೆಯನ್ನು ಕಳೆದುಕೊಂಡಿರುತ್ತದೆ.<br><br>ಸುಮಾರು 7000 ಸರ್ಕಾರಿ ಶಾಲೆಗಳಲ್ಲಿ ಪೂರ್ವ ಪ್ರಾಥಮಿಕ ತರಗತಿಗಳನ್ನು ಪ್ರಾರಂಭಿಸಲಾಗಿದ್ದು, ಸದರಿ ತರಗತಿಗಳಿಗೆ ಏಕತರಗತಿ ಬೋಧನಾ ಪದ್ಧತಿಯನ್ನು ಅಳವಡಿಸಿಕೊಳ್ಳಲಾಗಿದೆ. ಸದರಿ ವಿದ್ಯಾರ್ಥಿಗಳು ಏಕ ತರಗತಿ ಪದ್ಧತಿಯಿಂದ ಬಹುವರ್ಗ ಬೋಧನಾ ಪದ್ಧತಿ ಹೊಂದಿರುವ ಪ್ರಾಥಮಿಕ ತರಗತಿಗಳಿಗೆ ಸೇರಲು ಹಿಂಜರಿಯುತ್ತಿರುವುದನ್ನು ಗಮನಿಸಲಾಗಿದೆ. ಈಗಾಗಲೇ ಸರ್ಕಾರಿ ಶಾಲೆಗಳಲ್ಲಿ ಮಕ್ಕಳ ದಾಖಲಾತಿಯು ಶೇ.46 ರಿಂದ ಶೇ.38 ಕ್ಕೆ ಕುಸಿದಿದ್ದು, ಸರ್ಕಾರಿ ಶಾಲೆಗಳ ವಿದ್ಯಾರ್ಥಿಗಳ ಪೋಷಕರು ತಮ್ಮ ಮಕ್ಕಳನ್ನು ಏಕ ತರಗತಿ ಬೋಧನೆಗೆ ಒಳಪಡಿಸಲು ಇಚ್ಛಿಸುತ್ತಿರುವುದು ದಾಖಲಾತಿ ಪ್ರಮಾಣವು ಇಳಿಕೆಯಾಗುವುದಕ್ಕೆ ಕಾರಣವಾಗಿರುತ್ತದೆ. ಇದಲ್ಲದೇ ಖಾಸಗಿ ಶಾಲೆಗಳು ಪ್ರಾಥಮಿಕ ತರಗತಿಗಳಿಗೆ ಬಹುವರ್ಗ ಬೋಧನಾ ಪದ್ಧತಿ ಹೊಂದಿರುವುದಿಲ್ಲ. |

ಈ ಮೇಲಿನ ಕಾರಣಗಳನ್ನು ಗಣನೆಗೆ ತೆಗೆದುಕೊಂಡು ಕಾಲಕಾಲಕ್ಕೆ ಸರ್ಕಾರವು ಅನೇಕ ಅಗತ್ಯ ಉಪಕ್ರಮಗಳನ್ನು ಜಾರಿಗೊಳಿಸುತ್ತಾ ಬಂದಿದೆ. ಅದರಂತೆ ರಾಜ್ಯದ 35 ಶೈಕ್ಷಣಿಕ ಜಿಲ್ಲೆಗಳಲ್ಲಿ 2018-19ನೇ ಸಾಲಿನಿಂದ 2025-26 ನೇ ಸಾಲಿನವರೆಗೆ ವಿವಿಧ ಹಂತಗಳಲ್ಲಿ 9522 ಸರ್ಕಾರಿ ಶಾಲೆಗಳಲ್ಲಿ ದ್ವಿಭಾಷಾ ಬೋಧನಾ ಕ್ರಮವನ್ನು ಅನುಷ್ಠಾನಗೊಳಿಸಲು ಅನುಮತಿಸಲಾಗಿರುತ್ತದೆ. ಅಲ್ಲದೇ ಪ್ರಸಕ್ತ ಸಾಲಿನಲ್ಲಿ 474 ಕೆಪಿಎಸ್, 100 ಉರ್ದು ಕೆಪಿಎಸ್, ಕೆ.ಕೆ.ಆರ್.ಡಿ.ಬಿ ವತಿಯಿಂದ 200 ಕೆಪಿಎಸ್ ಶಾಲೆಗಳು, ಈ ಹಿಂದೆ ಅನುಮತಿ ಪಡೆದು ನಡೆಯುತ್ತಿರುವ 309 ಕೆಪಿಎಸ್ ಶಾಲೆಗಳು ಒಳಗೊಂಡಂತೆ ಒಟ್ಟು 1083 ಕೆಪಿಎಸ್ ಶಾಲೆಗಳು, 10 CEPMIZ ತಾಲ್ಲೂಕುಗಳಲ್ಲಿ ಉನ್ನತೀಕರಿಸಲಾಗುತ್ತಿರುವ 100 KPS ಶಾಲೆಗಳು, 585 ಪಿಎಂಶ್ರೀ ಶಾಲೆಗಳಲ್ಲಿ 01 ರಿಂದ 05ನೇ ತರಗತಿ ದ್ವಿಭಾಷಾ ಮಾಧ್ಯಮ ತರಗತಿಗಳನ್ನು ಪ್ರಾರಂಭಿಸಲು ಅನುಮತಿ ನೀಡಲಾಗಿದೆ. ಈ ವರೆವಿಗೆ 6675 ಸರ್ಕಾರಿ ಶಾಲೆಗಳಲ್ಲಿ ದ್ವಿಭಾಷಾ ಪೂರ್ವ ಪ್ರಾಥಮಿಕ ತರಗತಿಗಳಿಗೆ ಅನುಮತಿ ನೀಡಲಾಗಿರುತ್ತದೆ

ಸರ್ಕಾರಿ ಶಾಲೆಗಳಲ್ಲಿ 01 ರಿಂದ 05ನೇ ತರಗತಿಗೆ ದ್ವಿಭಾಷಾ ಮಾಧ್ಯಮ ತರಗತಿಗಳು ಪಠ್ಯ ಪುಸ್ತಕ ಆಧಾರಿತ ಏಕ ತರಗತಿ ಬೋಧನೆಯಂತೆ ಕಾರ್ಯ ನಿರ್ವಹಿಸುತ್ತಿವೆ. ಇದರಿಂದ ಒಂದೇ ಶಾಲೆಯಲ್ಲಿ ಕನ್ನಡ ಮಾಧ್ಯಮದ 01 ರಿಂದ 03ನೇ ತರಗತಿಗಳು ನಲಿ-ಕಲಿ ಬಹುವರ್ಗ ಕಲಿಕಾ ವಿಧಾನವನ್ನು ಮತ್ತು ದ್ವಿಭಾಷಾ ತರಗತಿಗಳಲ್ಲಿ ಏಕ ತರಗತಿ ಕಲಿಕಾ ವ್ಯವಸ್ಥೆ ಇರುವುದನ್ನು ಗಮನಿಸಲಾಗಿದೆ. ಈ ಎಲ್ಲಾ ಶಾಲೆಗಳಲ್ಲಿ ಏಕರೂಪದ ಶೈಕ್ಷಣಿಕ ಮತ್ತು ಆಡಳಿತಾತ್ಮಕ ವ್ಯವಸ್ಥೆಯನ್ನು ಜಾರಿಗೊಳಿಸಬೇಕಿರುತ್ತದೆ.

ಪ್ರಸ್ತುತ ಸ್ಪರ್ಧಾತ್ಮಕ ಅವಶ್ಯಕತೆಗಳಿಗೆ ಅನುಗುಣವಾಗಿ ಬೋಧನಾ ಕಲಿಕಾ ವಿಧಾನವನ್ನು ಪರಿಷ್ಕರಿಸುವ ಅಗತ್ಯತೆ ಕಂಡುಬಂದಿರುವ ಹಿನ್ನಲೆಯಲ್ಲಿ ಮತ್ತು ಎಲ್ಲಾ ಸರ್ಕಾರಿ ಶಾಲೆಗಳಲ್ಲಿ ಏಕರೂಪದ ಶೈಕ್ಷಣಿಕ ಮತ್ತು ಆಡಳಿತಾತ್ಮಕ ವ್ಯವಸ್ಥೆಯನ್ನು ಜಾರಿಗೊಳಿಸಲು 2026-27ನೇ ಸಾಲಿನಿಂದ ಮೊದಲ ಹಂತದಲ್ಲಿ ರಾಜ್ಯದ ಎಲ್ಲಾ ಕೆ.ಪಿ.ಎಸ್, ಪಿ.ಎಂ.ಶ್ರೀ ಶಾಲೆಗಳು ಮತ್ತು ಆಯ್ದ 15 ಜಿಲ್ಲೆಗಳ ಎಲ್ಲಾ ಸರ್ಕಾರಿ ಶಾಲೆಗಳಲ್ಲಿ ನಲಿಕಲಿ ಕಲಿಕಾ ವಿಧಾನದ ಬದಲು 01 ರಿಂದ 05ನೇ ತರಗತಿವರೆಗೆ ದ್ವಿಭಾಷಾ ಏಕ ತರಗತಿ ಪಠ್ಯ ಪುಸ್ತಕ ಆಧಾರಿತ ಬೋಧನಾ ಕಲಿಕಾ ಪದ್ಧತಿಯನ್ನು ಅಳವಡಿಸಲಾಗುತ್ತಿದೆ. ಈ ಶಾಲೆಗಳನ್ನು ಹೊರತುಪಡಿಸಿ ಉಳಿದ ಎಲ್ಲಾ ಶಾಲೆಗಳಲ್ಲಿ 2026-27ನೇ ಸಾಲಿಗೆ ನಲಿ-ಕಲಿ ಕಾರ್ಯಕ್ರಮವನ್ನು ಮುಂದುವರೆಸಲಾಗುತ್ತಿದೆ.

ಯಾವುದೇ ಮಕ್ಕಳು ಶಿಕ್ಷಣದಿಂದ ವಂಚಿತರಾಗದಂತೆ ಸೂಕ್ತ ಕ್ರಮವಹಿಸಲಾಗುವುದು.

| | | |
|---|---|---|
| ಆ | ಬಂದಿದಲ್ಲಿ, ಮಕ್ಕಳ ದಾಖಲಾತಿ ಸಂಖ್ಯೆ ಕಡಿಮೆ ಇದೆ ಎಂಬ ಕಾರಣ ನೀಡಿ ಸಮೀಪದ ಶಾಲೆಗಳಲ್ಲಿ ಈ ಶಾಲೆಗಳನ್ನು ವಿಲೀನ ಮಾಡಲು ಮುಂದಾದರೆ ಆ ಕುಗ್ರಾಮಗಳ ಮಕ್ಕಳ ಶಿಕ್ಷಣದ ಗತಿಯೇನು; | ರಾಜ್ಯದ ಯಾವುದೇ ಶಾಲೆಗಳನ್ನು ಮುಚ್ಚಲು ಸರ್ಕಾರ ಮುಂದಾಗಿರುವುದಿಲ್ಲ, ಆದ್ದರಿಂದ ಪ್ರಶ್ನೆ ಉದ್ಭವಿಸುವುದಿಲ್ಲ. |
| ಇ | ಈಗಾಗಲೇ, ಕರ್ನಾಟಕ ಪಬ್ಲಿಕ್ ಸ್ಕೂಲ್ (ಕೆಪಿಎಸ್) ಮತ್ತು ಮ್ಯಾಗ್ನೆಟ್ ಶಾಲೆಗಳ ಹೆಸರಿನಲ್ಲಿ ಸರ್ಕಾರಿ ಶಾಲೆಗಳ ವಿಲೀನ ಪ್ರಕ್ರಿಯೆ ವೇಗವಾಗಿ ನಡೆಯುತ್ತಿದ್ದು, ಇದರ ಜತೆಗೆ ಏಕಶಿಕ್ಷಕ ಶಾಲೆಗಳು ಕೂಡ ಸೇರಿದ್ದಲ್ಲಿ, ಕುಗ್ರಾಮಗಳ ಮಕ್ಕಳು ಶಿಕ್ಷಣ ಪಡೆಯುವ ಕುರಿತು ಸರ್ಕಾರದ ನಿಲುವೇನು; ಹಾಗೂ ಕೈಗೊಳ್ಳಲಿರುವ ಕ್ರಮಗಳೇನು; | ರಾಜ್ಯದ ಯಾವುದೇ ಶಾಲೆಗಳನ್ನು ಮುಚ್ಚಲು ಸರ್ಕಾರ ಮುಂದಾಗಿರುವುದಿಲ್ಲ, ಆದ್ದರಿಂದ ಪ್ರಶ್ನೆ ಉದ್ಭವಿಸುವುದಿಲ್ಲ. |
| ಈ | ಕುಗ್ರಾಮಗಳ ಮಕ್ಕಳು ಶಿಕ್ಷಣ ಪಡೆಯುವ ವ್ಯವಸ್ಥೆಯಲ್ಲಿ ಸ್ವಲ್ಪವೂ ವ್ಯತ್ಯಯ ಮತು ಲೋಪವಾಗದಂತೆ ನೋಡಿಕೊಳ್ಳಲು ಸರ್ಕಾರ ವಹಿಸಲಿರುವ ಕ್ರಮಗಳೇನು? | ಕುಗ್ರಾಮಗಳ ಮಕ್ಕಳು ಶಿಕ್ಷಣ ಪಡೆಯುವ ವ್ಯವಸ್ಥೆಯಲ್ಲಿ ಸ್ವಲ್ಪವೂ ವ್ಯತ್ಯಯ ಮತ್ತು ಲೋಪವಾಗದಂತೆ ಸರ್ಕಾರವು ಈ ಕೆಳಕಂಡ ಕ್ರಮಗಳನ್ನು ಕೈಗೊಂಡಿದೆ:<br>• 2018-19ನೇ ಸಾಲಿನಿಂದ ಪೂರ್ವ ಪ್ರಾಥಮಿಕದಿಂದ ಪದವಿ ಪೂರ್ವ ತರಗತಿವರೆಗೆ ಒಂದೇ ಸೂರಿನಡಿ ಗುಣಮಟ್ಟ ಶಿಕ್ಷಣ ನೀಡಲು ಕರ್ನಾಟಕ ಪಬ್ಲಿಕ್ ಶಾಲೆಗಳನ್ನು ಸ್ಥಾಪಿಸಲಾಗಿರುತ್ತದೆ. ಈಗಾಗಲೇ 309 ಕೆ.ಪಿ.ಎಸ್ ಶಾಲೆಗಳು ಕಾರ್ಯನಿರ್ವಹಿಸುತ್ತಿವೆ. ಪ್ರಸ್ತುತ 2402 ಕೆ.ಪಿ.ಎಸ್ ಶಾಲೆಗಳನ್ನು ಪ್ರಾರಂಭಿಸಲು ಅನುಮೋದಿಸಲಾಗಿದೆ.<br>• ಸರ್ಕಾರಿ ಶಾಲೆಗಳಲ್ಲಿ 1ನೇ ತರಗತಿಯಿಂದ ಮೇಲ್ಪಟ್ಟ ವಿಭಾಗಗಳಿಗೆ ದಾಖಲಾತಿ ಹೆಚ್ಚಿಸುವ ನಿಟ್ಟಿನಲ್ಲಿ 2018-19ನೇ ಸಾಲಿನಿಂದ ಪೂರ್ವಪ್ರಾಥಮಿಕ ತರಗತಿಗಳನ್ನು ಪ್ರಾರಂಭಿಸಲಾಗಿದ್ದು ಪ್ರಸ್ತುತ 2619 ಶಾಲೆಗಳಲ್ಲಿ ಪೂರ್ವ ಪ್ರಾಥಮಿಕ ತರಗತಿ ನಡೆಸಲಾಗುತ್ತಿದ್ದು, 2025-26ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ ಸಂಖ್ಯೆ111(i)ರಲ್ಲಿ ಘೋಷಿಸಿರುವಂತೆ 4056 ಶಾಲೆಗಳಲ್ಲಿ ಪೂರ್ವ ಪ್ರಾಥಮಿಕ ಶಿಕ್ಷಣ ವಿಭಾಗ ಪ್ರಾರಂಭಿಸಲು ಅನುಮೋದನೆ ನೀಡಲಾಗಿದೆ.<br>• 2018-19ನೇ ಸಾಲಿನಿಂದ 2025-26ನೇ ಸಾಲಿನವರೆಗೆ ರಾಜ್ಯದ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ 1 ನೇ ತರಗತಿಯಿಂದ ಪ್ರಸ್ತುತ ಇರುವ ಕನ್ನಡ /ಇತರೆ ಮಾಧ್ಯಮದ ಜೊತೆಗೆ ಒಟ್ಟು 9522 ದ್ವಿಭಾಷಾ (Bilingual) ಮಾಧ್ಯಮ ತರಗತಿಗಳನ್ನು ಪ್ರಾರಂಭಿಸಲಾಗಿದೆ. |

| | | |
|---|---|---|
| | | • 2024-25ನೇ ಸಾಲಿಗೆ 59 ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಗಳನು ಹಿರಿಯ ಪ್ರಾಥಮಿಕ (6-7ನೇ ತರಗತಿ) ಶಾಲೆಗಳನ್ನಾಗಿ ಮತ್ತು 91 ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳಲ್ಲಿ 8ನೇ ತರಗತಿಗೆ ಉನ್ನತೀಕರಿಸಿ ಆದೇಶಿಸಲಾಗಿರುತ್ತದೆ.<br>• 2025-26ನೇ ಸಾಲಿಗೆ 42 ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಗಳನ್ನು ಹಿರಿಯ ಪ್ರಾಥಮಿಕ(6-7 ಮತ್ತು 8ನೇ ತರಗತಿ) ಶಾಲೆಗಳನ್ನಾಗಿ ಮತ್ತು ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳನ್ನು 8ನೇ ತರಗತಿಯವರೆಗೆ ಉನ್ನತೀಕರಿಸಲು ಸರ್ಕಾರದ ಮಂಜೂರಾತಿ ನೀಡಲಾಗಿದೆ.<br>• ಸರ್ಕಾರಿ ಶಾಲೆಗಳಲ್ಲಿ ವಿದ್ಯಾರ್ಥಿಗಳ ದಾಖಲಾತಿ ಹೆಚ್ಚಿಸಲು ದಾಖಲಾತಿ ಆಂದೋಲನ, ಸೇತುಬಂಧ ಹಾಗೂ ಮಿಂಚಿನ ಸಂಚಾರ ಕಾರ್ಯಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.<br>• ರಾಜ್ಯದ ಎಲ್ಲಾ ಕೆ.ಪಿ.ಎಸ್. ಶಾಲೆಗಳು, ಪಿ.ಎಂ.ಶ್ರೀ ಶಾಲೆಗಳು, ದ್ವಿಭಾಷಾ ತರಗತಿಗಳನ್ನು ಪ್ರಾರಂಭಿಸಿರುವ ಸರ್ಕಾರಿ ಶಾಲೆಗಳು, ಪೂರ್ವ ಪ್ರಾಥಮಿಕ ತರಗತಿಗಳನ್ನು ಪ್ರಾರಂಭಿಸಿರುವ ಸರ್ಕಾರಿ ಶಾಲೆಗಳು, ಗಣಿಬಾಧಿತ ತಾಲ್ಲೂಕುಗಳಾದ ಚಿತ್ರದುರ್ಗ, ಹೊಳಲ್ಕೆರೆ, ಮೊಳಕಾಲೂರು, ಹೊಸದುರ್ಗ, ಚಿಕ್ಕನಾಯಕನಹಳ್ಳಿ, ಗುಬ್ಬಿ, ತಿಪಟೂರು, ಬಳ್ಳಾರಿ, ಸಂಡೂರು, ಮತ್ತು ಹೊಸಪೇಟೆ ತಾಲ್ಲೂಕುಗಳಲ್ಲಿನ ಎಲ್ಲಾ ಸರ್ಕಾರಿ ಶಾಲೆಗಳು ಮತ್ತು 15 ಜಿಲ್ಲೆಗಳಾದ ಬೆಂಗಳೂರು ಉತ್ತರ, ಬೆಂಗಳೂರು ದಕ್ಷಿಣ, ಬೆಂಗಳೂರು ಗ್ರಾಮಾಂತರ, ರಾಮನಗರ, ಹಾವೇರಿ, ಕಲಬುರಗಿ, ಶಿವಮೊಗ್ಗ, ಹಾಸನ, ತುಮಕೂರು, ದಕ್ಷಿಣ ಕನ್ನಡ, ಕೋಲಾರ, ಧಾರವಾಡ, ಬಾಗಲಕೋಟೆ, ವಿಜಯಪುರ, ಕೊಪ್ಪಳ ಜಿಲ್ಲೆಗಳ ಎಲ್ಲಾ ಸರ್ಕಾರಿ ಶಾಲೆಗಳಲ್ಲಿ 1 ರಿಂದ 5 ನೇ ತರಗತಿಗಳಿಗೆ ಏಕತರಗತಿ ದ್ವಿಭಾಷಾ ಪಠ್ಯ ಪುಸ್ತಕಗಳನ್ನು ನೀಡಲು ಕ್ರಮವಹಿಸಲಾಗುತ್ತಿದೆ.<br>• ಶೈಕ್ಷಣಿಕ ಸ್ಥಿತಿಗತಿಗಳಿಗೆ ಅನುಗುಣವಾಗಿ ಕಲಿಕಾ ಶೈಲಿಯ ಬದಲಾವಣೆ, ಆಧುನಿಕ ಕಲಿಕಾ ವಿಧಾನಗಳ ಅಳವಡಿಕೆ, ಮೂಲ ಭೂತ ಸೌಕರ್ಯಗಳು ಹಾಗೂ ಶಿಕ್ಷಕರ ಕೊರತೆ ಇಲ್ಲದಂತೆ ನೋಡಿಕೊಳ್ಳುವುದರೊಂದಿಗೆ ಸರ್ಕಾರಿ ಶಾಲೆಗಳಲ್ಲಿ ಬೋಧನಾ ಗುಣಮಟ್ಟ ಮತ್ತು ಕಲಿಕಾ ಫಲಿತಾಂಶವನ್ನು ಸುಧಾರಿಸಲು ಪಠ್ಯ ಆಧಾರಿತ ಮೌಲ್ಯಮಾಪನ (Lesson Based Assessment)ವನ್ನು ಜಾರಿಗೊಳಿಸಲಾಗಿದೆ.<br>• ಶಾಲಾ ಲಭ್ಯತೆಯಿಲ್ಲದ ಪ್ರದೇಶಗಳಿಂದ ಸಮೀಪದಲ್ಲಿರುವ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಿಗೆ ದಾಖಲಾಗಿ ವ್ಯಾಸಂಗ ಮಾಡುತ್ತಿರುವ ಮಕ್ಕಳಿಗೆ ಸಾರಿಗೆ ಮತ್ತು ಬೆಂಗಾವಲು ಭತ್ಯೆಯನ್ನು ನೀಡಲಾಗುತ್ತಿದೆ. ಅರ್ಹ ಪ್ರತಿ ವಿದ್ಯಾರ್ಥಿಗೆ ತಿಂಗಳಿಗೆ ರೂ. 600.00 ರಂತೆ 10 ತಿಂಗಳಿಗೆ ರೂ.6000.00 ಸಾರಿಗೆ ಭತ್ಯೆ ನೀಡಲಾಗುತ್ತಿದೆ. |

| | | |
|---|---|---|
| | | • ಆಯ್ದ ಪ್ರೌಢಶಾಲೆಗಳಲ್ಲಿ 2014-15ನೇ ಸಾಲಿನಿಂದ ವೃತ್ತಿ ಶಿಕ್ಷಣ ತರಗತಿಗಳನ್ನು ಪ್ರಾರಂಭಿಸಲಾಗಿದೆ. ಇದರ ಜೊತೆಗೆ ವೃತ್ತಿಮಾರ್ಗದರ್ಶನ ತರಬೇತಿಗಳನ್ನು ನೀಡಲಾಗುತ್ತಿದೆ.<br>• 2019-20ನೇ ಸಾಲಿನಿಂದ ಪ್ರಾಥಮಿಕ ಶಾಲೆಗಳಲ್ಲಿ ದಾಖಲಾತಿ ಹೆಚ್ಚಿಸಲು ದ್ವಿಭಾಷಾ ಮಾಧ್ಯಮ ತರಗತಿಗಳನ್ನು ಪ್ರಾರಂಭಿಸಲಾಗಿದೆ. ಪ್ರಸ್ತುತ 9523 ಕನ್ನಡ/ಉರ್ದು ಮಾಧ್ಯಮ ಶಾಲೆಗಳಲ್ಲಿ ದ್ವಿಭಾಷಾ ಮಾಧ್ಯಮ ತರಗತಿಗಳನ್ನು ನಡೆಸಲಾಗುತ್ತಿದೆ.<br>• ದುರ್ಬಲ ವರ್ಗದ ವಿದ್ಯಾರ್ಥಿಗಳ ವಿದ್ಯಾಭ್ಯಾಸಕ್ಕೆ ಅನುಕೂಲವಾಗುವಂತೆ 06 ನೇತಾಜಿ ಸುಭಾಷ್ ಚಂದ್ರಬೋಸ್ ಆವಾಸಿಯ ವಿದ್ಯಾಲಯಗಳನ್ನು ನಡೆಸಲಾಗುತ್ತಿದೆ.<br>• ರಾಜ್ಯ ಸರ್ಕಾರದ ಅನುದಾನದಡಿ ಒಟ್ಟು 74 ಆದರ್ಶ ವಿದ್ಯಾಲಯಗಳನ್ನು ಸ್ಥಾಪಿಸಿ ಆಂಗ್ಲಮಾಧ್ಯಮದಲ್ಲಿ ಶಿಕ್ಷಣ ನೀಡಲಾಗುತ್ತಿದೆ.<br>• ಸರ್ಕಾರಿ ಶಾಲೆಗಳಲ್ಲಿ ದಾಖಲಾತಿ ಹೆಚ್ಚಿಸಲು ವಿಶೇಷವಾಗಿ ಪ್ರೌಢ ಶಾಲೆಗಳಲ್ಲಿ ಕಂಪ್ಯೂಟರ್ ಲ್ಯಾಬ್ ಹಾಗೂ ಸ್ಮಾರ್ಟ್ ಕ್ಲಾಸ್ ಮೂಲಕ ತರಗತಿಗಳನ್ನು ನಿರ್ವಹಿಸಲಾಗುತ್ತಿದೆ.<br>• ಮಕ್ಕಳ ಹಾಜರಾತಿಯನ್ನು ಉತ್ತೇಜಿಸಲು, ಇಲಾಖೆಯು ವಿದ್ಯಾವಿಕಾಸ ಕಾರ್ಯಕ್ರಮದ ಅಡಿಯಲ್ಲಿ ಸರ್ಕಾರಿ ಮತ್ತು ಅನುದಾನಿತ ಶಾಲೆಗಳ ಎಲ್ಲಾ ವಿದ್ಯಾರ್ಥಿಗಳಿಗೆ ಪಠ್ಯಪುಸ್ತಕಗಳು, Work Book, ಶೂ-ಸಾಕ್ಸ್, ಎರಡು ಸೆಟ್ ಸಮವಸ್ತ್ರಗಳು ಮತ್ತು Vitamin ಮಾತ್ರೆಗಳು ಮುಂತಾದ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ. ಮಧ್ಯಾಹ್ನ ಉಪಹಾರ ಯೋಜನೆ ಹಾಗೂ ಕ್ಷೀರಭಾಗ್ಯ ಯೋಜನೆಯಡಿ ಮಧ್ಯಾಹ್ನದ ಬಿಸಿ ಊಟ, ಹಾಲು, ಮೊಟ್ಟೆ, ಬಾಳೆಹಣ್ಣು ಒದಗಿಸಲಾಗುತ್ತಿದೆ..<br>• ಪ್ರತೀ ವರ್ಷ ಸಮೀಕ್ಷೆಯಲ್ಲಿ ಗುರುತಿಸಲಾದ ಶಾಲೆಯಿಂದ ಹೊರಗುಳಿದ 6 ರಿಂದ 14 ನೇ ವಯೋಮಾನದ ಮಕ್ಕಳಿಗೆ ಉಚಿತವಾಗಿ 3/6/9/12 ತಿಂಗಳ ವಸತಿ ಸಹಿತ / ವಸತಿ ರಹಿತ ವಿಶೇಷ ತರಬೇತಿ ನೀಡಿ ಶೈಕ್ಷಣಿಕ ಮುಖ್ಯವಾಹಿನಿಗೆ ತರಲಾಗುತ್ತಿದೆ.<br>• ರಾಜ್ಯದ ಎಲ್ಲಾ ಕೆ.ಪಿ.ಎಸ್. ಶಾಲೆಗಳು, ಎಲ್ಲಾ ಪಿ.ಎಂ.ಶ್ರೀ ಶಾಲೆಗಳು, ಎಲ್ಲಾ ದ್ವಿಭಾಷಾ ತರಗತಿಗಳನ್ನು ಪ್ರಾರಂಭಿಸಿರುವ ಸರ್ಕಾರಿ ಶಾಲೆಗಳು, ಎಲ್ಲಾ ಪೂರ್ವ ಪ್ರಾಥಮಿಕ ತರಗತಿಗಳನ್ನು ಪ್ರಾರಂಭಿಸಿರುವ ಸರ್ಕಾರಿ ಶಾಲೆಗಳು, ಗಣಿಬಾಧಿತ ತಾಲ್ಲೂಕುಗಳಾದ ಚಿತ್ರದುರ್ಗ, ಹೊಳಲ್ಕೆರೆ, ಮೊಳಕಾಲ್ಮೂರು, ಹೊಸದುರ್ಗ, ಚಿಕ್ಕನಾಯಕನಹಳ್ಳಿ, ಗುಬ್ಬಿ, ತಿಪಟೂರು, ಬಳ್ಳಾರಿ, ಸಂಡೂರು, ಮತ್ತು ಹೊಸಪೇಟೆ ತಾಲ್ಲೂಕುಗಳಲ್ಲಿನ ಎಲ್ಲಾ ಸರ್ಕಾರಿ ಶಾಲೆಗಳು ಮತ್ತು 15 ಜಿಲ್ಲೆಗಳಾದ ಬೆಂಗಳೂರು ಉತ್ತರ, ಬೆಂಗಳೂರು ದಕ್ಷಿಣ, ಬೆಂಗಳೂರು ಗ್ರಾಮಾಂತರ, ರಾಮನಗರ, ಹಾವೇರಿ, ಕಲಬುರಗಿ, ಶಿವಮೊಗ್ಗ, ಹಾಸನ, |

| | | |
|---|---|---|
| | | ತುಮಕೂರು, ದಕ್ಷಿಣ ಕನ್ನಡ, ಕೋಲಾರ, ಧಾರವಾಡ, ಬಾಗಲಕೋಟೆ, ವಿಜಯಪುರ, ಕೊಪ್ಪಳ ಜಿಲ್ಲೆಗಳ ಎಲ್ಲಾ ಸರ್ಕಾರಿ ಶಾಲೆಗಳಲ್ಲಿ 1 ರಿಂದ 5 ನೇ ತರಗತಿಗಳಿಗೆ ಏಕತರಗತಿ ದ್ವಿಭಾಷಾ ಪಠ್ಯಪುಸ್ತಕಗಳನ್ನು ನೀಡಲು ಕ್ರಮವಹಿಸಲಾಗುತ್ತಿದೆ..<br>• ಶಾಲೆಗಳಲ್ಲಿ ದಾಖಲಾತಿಗೆ ಅನುಗುಣವಾಗಿ ಮೂಲಸೌಕರ್ಯಗಳನ್ನು ಗುರುತಿಸಿ, ಅರ್ಹತೆ ಮತ್ತು ಆದ್ಯತೆಗನುಗುಣವಾಗಿ ಅನುದಾನದ ಲಭ್ಯತೆಯನ್ನು ಆಧರಿಸಿ ಮೂಲಕಸೌಕರ್ಯಗಳನ್ನು ಒದಗಿಸಲಾಗುತ್ತಿದೆ.<br>• ಸರ್ಕಾರಿ ಶಾಲೆಗಳಲ್ಲಿ ಖಾಲಿ ಇರುವ ಹುದ್ದೆಗಳಿಗೆದುರಾಗಿ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಶೈಕ್ಷಣಿಕ ವರ್ಷದ ಪ್ರಾರಂಭದಲ್ಲಿಯೇ ಸರ್ಕಾರಿ ಪ್ರಾಥಮಿಕ ಮತ್ತು ಸರ್ಕಾರಿ ಪ್ರೌಢ ಶಾಲೆಗಳಿಗೆ ಅತಿಥಿ ಶಿಕ್ಷಕರುಗಳನ್ನು ತಾತ್ಕಾಲಿಕವಾಗಿ ನೇಮಕಾತಿ ಮಾಡಿಕೊಳ್ಳಲು ಕ್ರಮವಹಿಸಲಾಗುತ್ತಿದೆ. |

**ಇಪಿ 107 ಯೋಸಕ 2026**

**(ಎಸ್. ಮಧು ಬಂಗಾರಪ್ಪ)**
**ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು**